Akashvani : Bangalore
National Bulletin In Kannada
30.03.2024: 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*******

ಮುಖ್ಯಾಂಶಗಳು:

- ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಇಂದು ರಾಷ್ಟ್ರಪತಿ ಭವನದಲ್ಲಿ ಪ್ರತಿಷ್ಠಿತ ಭಾರತರತ್ನ ಪ್ರಶಸ್ತಿ ಪ್ರದಾನ
- ಉಕ್ರೇನ್ ವಿದೇಶಾಂಗ ಸಚಿವರೊಂದಿಗೆ ದ್ವಿಪಕ್ಷೀಯ ಸಂಬಂಧಗಳ ಬಲವರ್ಧನೆ ಕುರಿತು ಸಚಿವ ಡಾ. ಎಸ್. ಜೈಶಂಕರ್ ಚರ್ಚೆ
- ಮೊದಲ ಹಂತದ ಲೋಕಸಭಾ ಚುನಾವಣೆ: ನಾಮಪತ್ರ ಹಿಂಪಡೆಯಲು ಇಂದು ಕೊನೆಯ ದಿನ
- ಕರ್ನಾಟಕದಲ್ಲಿ ರಂಗೇರಿದ ಲೋಕಸಭಾ ಚುನಾವಣಾ ಕಣ; ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪ್ರಗತಿಯಲ್ಲಿ
- ಮ್ಯಾಡ್ರಿಡ್ ಬ್ಯಾಡ್ಮಿಂಟನ್ ಟೂರ್ನಿ; ಭಾರತದ ಎನ್. ಸಿಕ್ಕಿರೆಡ್ಡಿ - ಬಿ. ಸುಮಿತ್ ರೆಡ್ಡಿ ಮಿಶ್ರ ಡಬಲ್ಸ್ ಜೋಡಿ ಸೆಮಿಫೈನಲ್ ಪ್ರವೇಶ

***********

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ರಾಷ್ಟ್ರಪತಿ ಭವನದಲ್ಲಿ ಪ್ರತಿಷ್ಠಿತ ಭಾರತರತ್ನ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಮಾಜಿ ಪ್ರಧಾನಮಂತ್ರಿಗಳಾದ ಚೌಧರಿ ಚರಣ್ ಸಿಂಗ್, ಪಿ.ವಿ. ನರಸಿಂಹರಾವ್, ಬಿಹಾರದ ಮಾಜಿ ಮುಖ್ಯಮಂತ್ರಿ ಕರ್ಪೂರಿ ಠಾಕೂರ್ ಹಾಗೂ ಖ್ಯಾತ ವಿಜ್ಞಾನಿ ಎಂ.ಎಸ್. ಸ್ವಾಮಿನಾಥನ್ ಅವರಿಗೆ ಮರಣೋತ್ತರವಾಗಿ ಭಾರತರತ್ನ ಗೌರವವನ್ನು ಪ್ರದಾನ ಮಾಡಲಾಗುವುದು. ಅಲ್ಲದೆ ಮಾಜಿ ಉಪಪ್ರಧಾನಿ ಹಾಗೂ ಬಿಜೆಪಿಯ ಹಿರಿಯ ನಾಯಕ ಎಲ್.ಕೆ. ಅಡ್ವಾಣಿ ಅವರಿಗೆ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಯನ್ನು ನೀಡಿ, ಗೌರವಿಸಲಾಗುವುದು.

***********

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ನವದೆಹಲಿಯಲ್ಲಿ ನಿನ್ನೆ ತಮ್ಮ ಉಕ್ರೇನ್‌ನ ಸಹವರ್ತಿ ಡಿಮ್ಯೆತ್ರೊ ಕುಲೇಬಾ ಅವರೊಂದಿಗೆ ಪ್ರಸ್ತುತ ನಡೆಯುತ್ತಿರುವ ರಷ್ಯಾ - ಉಕ್ರೇನ್ ಸಂಘರ್ಷ ಮತ್ತು ಅದರ ವ್ಯಾಪಕ ಪರಿಣಾಮಗಳ ಕುರಿತಂತೆ ಚರ್ಚೆ ನಡೆಸಿದರು. ಜೈಶಂಕರ್ ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಉಕ್ರೇನ್ ವಿದೇಶಾಂಗ ಸಚಿವರೊಂದಿಗೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಹಾಗೂ ಜಾಗತಿಕ ವಿಚಾರಗಳ ಕುರಿತಂತೆ ಚರ್ಚೆ ನಡೆಸಲಾಯಿತು. ದ್ವಿಪಕ್ಷೀಯ ಸಹಕಾರ ಸೇರಿದಂತೆ ಒಟ್ಟಾರೆ ಸಂಬಂಧ ಬಲವರ್ಧನೆಗೆ ಭಾರತ ಬದ್ಧವಿರುವುದಾಗಿ ತಿಳಿಸಿದ್ದಾರೆ. ಉಕ್ರೇನ್ ಸಚಿವರು ಅಲ್ಲಿನ ಸ್ಥಿತಿಗತಿಯನ್ನು ವಿವರಿಸಿದ್ದಾರೆ. ಭಾರತ ಮತ್ತು ಉಕ್ರೇನ್ ನಡುವಿನ ದ್ವಿಪಕ್ಷೀಯ ಸಂಬಂಧ ಬಲವರ್ಧನೆಗೆ ಈ ಭೇಟಿ ಸಹಕಾರಿಯಾಗಿದೆ. ಜತೆಗೆ ವ್ಯಾಪಾರ ಮತ್ತು ಹೂಡಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ, ರಕ್ಷಣೆ, ಕೃಷಿ, ಆರೋಗ್ಯ, ಸಂಸ್ಕೃತಿ ಮತ್ತು ಶಿಕ್ಷಣ ವಲಯದಲ್ಲಿ ಸಂಬಂಧಗಳ ವಿಸ್ತರಣೆಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು. ಉಭಯ ನಾಯಕರು ಸದ್ಯ ನಡೆಯುತ್ತಿರುವ ಸಂಘರ್ಷ ಹಾಗೂ ಶಾಂತಿಯುತ ಒಪ್ಪಂದ ಸೇರಿದಂತೆ ಹಲವು ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ಬಗ್ಗೆ ವಿಚಾರ ವಿನಿಮಯ ನಡೆಸಿದರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***********

ಮೊದಲ ಹಂತದ ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ನಾಮಪತ್ರ ಹಿಂಪಡೆಯಲು ಇಂದು ಕೊನೆಯ ದಿನವಾಗಿದೆ. ಮೊದಲ ಹಂತದಲ್ಲಿ ೨೧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ೧೦೨ ಲೋಕಸಭಾ ಕ್ಷೇತ್ರಗಳಲ್ಲಿ ಏಪ್ರಿಲ್ ೧೯ರಂದು ಮತದಾನ ನಿಗದಿಯಾಗಿದೆ. ಜೊರಾಹತ್, ಲಕ್ಕಿಂಪುರ್, ದಿಬ್ರುಗಡ್, ಸೋನಿತ್‌ಪುರ್ ಮತ್ತು ಕಾಜಿರಂಗ ಕ್ಷೇತ್ರಗಳಲ್ಲಿ ಒಟ್ಟು ೩೬ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ಬಿಜೆಪಿ ೫ ಕ್ಷೇತ್ರಗಳಲ್ಲೂ ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಕಾಂಗ್ರೆಸ್ ೪ ಕ್ಷೇತ್ರಗಳಲ್ಲಿ ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದು, ಒಂದು ಕ್ಷೇತ್ರದಲ್ಲಿ ಎಜೆಪಿ ಪಕ್ಷವನ್ನು ಬೆಂಬಲಿಸಿದೆ. ಅಸ್ಸಾಂನ ೫ ಲೋಕಸಭಾ ಕ್ಷೇತ್ರಗಳಲ್ಲಿ ಮೊದಲ ಹಂತದಲ್ಲಿ ಚುನಾವಣೆ ನಡೆಯಲಿದ್ದು, ನಾಮಪತ್ರಗಳನ್ನು ಹಿಂಪಡೆಯಲು ಇಂದು ಕೊನೆಯ ದಿನವಾಗಿದೆ.

***********

ಮುಂಬರುವ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಐವರು ಅಭ್ಯರ್ಥಿಗಳ ಮತ್ತೊಂದು ಪಟ್ಟಿಯನ್ನು ಬಿಡುಗಡೆ ಮಾಡಿದೆ. ಪಕ್ಷ ಸಿ.ಪಿ. ಜೋಶಿ ಅವರನ್ನು ರಾಜಸ್ತಾನದ ಭಿಲ್ವಾರದಿಂದ ಹಾಗೂ ದಾಮೋದರ್ ಗುರ್ಜಾರ್ ಅವರನ್ನು ರಾಜ್ ಸಮಂದ್ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಸಲಿದೆ.

***********

ದೇಶದಲ್ಲಿ ಚುನಾವಣೆಗಳ ವೇಳೆ ನಡೆಯುವ ಅಕ್ರಮಗಳು, ಮಾದರಿ ನೀತಿ ಸಂಹಿತೆಯ ಉಲ್ಲಂಘನೆ ಪ್ರಕರಣಗಳ ಮೇಲೆ ನಿಗಾ ಇಡುವುದು ಕೇವಲ ಚುನಾವಣಾ ಸಿಬ್ಬಂದಿಯ ಕೆಲಸವಲ್ಲ. ಅದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವೂ ಹೌದು. ಹಾಗಾಗಿ ಚುನಾವಣಾ ಅಕ್ರಮಗಳ ಬಗ್ಗೆ ಸಾರ್ವಜನಿಕರು ಆಯೋಗಕ್ಕೆ ದೂರು ನೀಡಲು ಆಯೋಗ ಸಿ-ವಿಜಿಲ್ ಆಪ್‌ಅನ್ನು ಅಭಿವೃದ್ಧಿಪಡಿಸಿದ್ದು, ಲೋಕಸಭಾ ಸಾರ್ವತ್ರಿಕ ಚುನಾವಣೆ ಘೋಷಣೆಯಾದ ನಂತರ ಸಿ-ವಿಜಿಲ್ ಆಪ್ ಮೂಲಕ ಈವರೆಗೆ ೭೯ ಸಾವಿರಕ್ಕೂ ಅಧಿಕ ಉಲ್ಲಂಘನೆ ಪ್ರಕರಣಗಳು ವರದಿಯಾಗಿವೆ. ಆ ಪೈಕಿ ಶೇಕಡ ೯೯ರಷ್ಟು ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಶೇಕಡ ೮೯ ರಷ್ಟು ದೂರುಗಳನ್ನು ೧೦೦ ನಿಮಿಷಗಳಲ್ಲಿ ಪರಿಹರಿಸಲಾಗಿದೆ ಎಂದು ಚುನಾವಣಾ ಆಯೋಗ ಹೇಳಿಕೆಯಲ್ಲಿ ತಿಳಿಸಿದೆ. ಅಕ್ರಮ ಹೋರ್ಡಿಂಗ್ ಹಾಗೂ ಬ್ಯಾನರ್‌ಗಳ ವಿರುದ್ಧ ೫೮ ಸಾವಿರದ ೫೦೦ಕ್ಕೂ ಹೆಚ್ಚು ದೂರುಗಳು ಬಂದಿವೆ. ಹಣ, ಉಡುಗೊರೆ ಹಾಗೂ ಮದ್ಯ ವಿತರಣೆಗೆ ಸಂಬಂಧಿಸಿದಂತೆ ೧ ಸಾವಿರದ ೪೦೦ಕ್ಕೂ ಅಧಿಕ ದೂರುಗಳು ದಾಖಲಾಗಿವೆ.

***********

ಕರ್ನಾಟಕದಲ್ಲಿ ಲೋಕಸಭಾ ಚುನಾವಣಾ ಕಣ ರಂಗೇರುತ್ತಿದ್ದು, ಮೊದಲ ಹಂತದ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ. ಈ ಮಧ್ಯೆ, ಬಾಕಿ ಇದ್ದ ೪ ಕ್ಷೇತ್ರಗಳ ಪೈಕಿ ಮೂರು ಕ್ಷೇತ್ರಗಳಿಗೆ ಕಾಂಗ್ರೆಸ್ ತನ್ನ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿದೆ. ಬಳ್ಳಾರಿಯಿಂದ ಇ. ತುಕಾರಾಂ, ಚಾಮರಾಜನಗರದಿಂದ ಸುನಿಲ್ ಬೋಸ್ ಮತ್ತು ಚಿಕ್ಕಬಳ್ಳಾಪುರದಿಂದ ರಕ್ಷಾ ರಾಮಯ್ಯ ಅವರಿಗೆ ಪಕ್ಷದ ಟಿಕೆಟ್ ನೀಡಲಾಗಿದೆ. ಕೋಲಾರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಕಗ್ಗಂಟು ಮುಂದುವರಿದಿದ್ದು, ಕಾಂಗ್ರೆಸ್ ಇನ್ನು ಪಕ್ಷದ ಅಭ್ಯರ್ಥಿಯನ್ನು ಅಂತಿಮಗೊಳಿಸಿಲ್ಲ. ಜೆಡಿಎಸ್ ಕೂಡ ತಾನು ಸ್ಪರ್ಧಿಸಲಿರುವ ಮೂರು ಕ್ಷೇತ್ರಗಳ ಅಭ್ಯರ್ಥಿಗಳ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಿದ್ದು, ಅದರಂತೆ ಹಾಸನದಲ್ಲಿ ಹಾಲಿ ಸಂಸದ ಪ್ರಜ್ವಲ್ ರೇವಣ್ಣ ಮತ್ತು ಮಂಡ್ಯದಲ್ಲಿ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ಪಕ್ಷದ ಅಭ್ಯರ್ಥಿಗಳಾಗಿ ಸ್ಪರ್ಧಿಸಲಿದ್ದಾರೆ.

ಕೋಲಾರ ಲೋಕಸಭಾ ಕ್ಷೇತ್ರದಿಂದ ಎಂ. ಮಲ್ಲೇಶ್ ಬಾಬು ಅವರನ್ನು ಕಣಕ್ಕಿಳಿಸಲು ಪಕ್ಷ ತೀರ್ಮಾನಿಸಿದೆ. ಮೊದಲ ಹಂತದಲ್ಲಿ ರಾಜ್ಯದ ೧೪ ಲೋಕಸಭಾ ಕ್ಷೇತ್ರಗಳಿಗೆ ಏಪ್ರಿಲ್ ೨೬ರಂದು ಮತದಾನ ನಡೆಯಲಿದ್ದು, ನಾಮಪತ್ರ ಸಲ್ಲಿಕೆಗೆ ಏಪ್ರಿಲ್ ೪ ಕಡೆಯ ದಿನವಾಗಿದ್ದು, ಏಪ್ರಿಲ್ ೫ ರಂದು ನಾಮಪತ್ರಗಳ ಪರಿಶೀಲನೆ ಕಾರ್ಯ ನಡೆಯಲಿದೆ.

***********

ಕೃತಕ ಬುದ್ಧಿಮತ್ತೆ ತಂತ್ರಜ್ಞಾನಗಳ ಲಭ್ಯತೆಗೂ ಮುನ್ನ ಅವುಗಳ ಬಳಕೆಯ ಬಗ್ಗೆ ಸೂಕ್ತ ತರಬೇತಿಗೆ ಹೆಚ್ಚಿನ ಒತ್ತು ನೀಡಬೇಕಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ. ಮೈಕ್ರೋಸಾಫ್ಟ್ ಸಂಸ್ಥಾಪಕ ಬಿಲ್‌ಗೇಟ್ಸ್ ಅವರೊಂದಿಗೆ ಸಂವಾದ ನಡೆಸಿದ ಪ್ರಧಾನಿ, ಸೂಕ್ತ ತರಬೇತಿಯಿಲ್ಲದೆ, ಕೃತಕ ಬುದ್ಧಿಮತ್ತೆಯಂತಹ ಉತ್ತಮ ತಂತ್ರಜ್ಞಾನಗಳನ್ನು ಒದಗಿಸಿದರೆ ಅವುಗಳು ದುರುಪಯೋಗವಾಗುವ ಸಾಧ್ಯತೆ ಇದೆ ಎಂದರು. ಭಾರತದಂತಹ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಯಾರು ಬೇಕಾದರೂ, ಡೀಪ್ ಫೇಕ್ ಮಾಡಬಹುದು, ಹಾಗಾಗಿ ನೈಜ ವಿಷಯಕ್ಕಿಂತ ಭಿನ್ನವಾಗಿರುವ ಡೀಪ್ ಫೇಕ್ ಕುರಿತಂತೆ ಸ್ಪಷ್ಟ ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳುವುದು ಸೂಕ್ತ ಎಂದರು. ಡಿಜಿಟಲ್ ಮೂಲಸೌಕರ್ಯವೃದ್ಧಿ ಇಂದಿನ ದೊಡ್ಡ ಅಗತ್ಯತೆಯಾಗಿದೆ ಮತ್ತು ಅದಕ್ಕಾಗಿ ಸರ್ಕಾರ ಗ್ರಾಮೀಣ ಮಟ್ಟದಲ್ಲಿ ಡಿಜಿಟಲ್ ಮೂಲಸೌಕರ್ಯ ವೃದ್ಧಿಗೆ ಸಾಕಷ್ಟು ಕ್ರಮಗಳನ್ನು ಕೈಗೊಂಡಿದೆ. ಆ ತಂತ್ರಜ್ಞಾನಗಳನ್ನು ನಾವು ಆರೋಗ್ಯ, ಶಿಕ್ಷಣ ಮತ್ತು ಕೃಷಿ ವಲಯಗಳ ಆಧುನೀಕರಣಕ್ಕೆ ಸಮರ್ಪಕವಾಗಿ ಬಳಸಿಕೊಳ್ಳಬೇಕಾಗಿದೆ ಎಂದು ಪ್ರಧಾನಿ ಹೇಳಿದರು. ಬಿಲ್ ಗೇಟ್ಸ್ ಅವರು, ಭಾರತದ ತಾಂತ್ರಿಕ ಪ್ರಗತಿಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು ಮತ್ತು ಕೃತಕಬುದ್ಧಿಮತ್ತೆ ನಾವೀನ್ಯತೆಯ ರಾಷ್ಟ್ರ ಮಹತ್ವದ ಪಾತ್ರವಹಿಸಲಿದೆ ಎಂದು ಹೇಳಿದರು.

***********

ಈಶಾನ್ಯ ಭಾರತದಲ್ಲಿಂದು ಗುಡುಗು, ಮಿಂಚಿನಿಂದ ಕೂಡಿದ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಅರುಣಾಚಲಪ್ರದೇಶ, ಅಸ್ಸಾಂ ಮತ್ತು ಮೇಘಾಲಯದಲ್ಲಿ ಮಳೆಯ ಜತೆ ಹಿಮಪಾತವು ಸಂಭವಿಸುವ ಸಾಧ್ಯತೆ ಇದೆ ಎಂದು ಐಎಂಡಿ ಹೇಳಿದೆ.

ಅಲ್ಲದೆ ಜಮ್ಮು - ಕಾಶ್ಮೀರ, ಲಡಾಖ್, ಗಿಲ್ಗಿತ್, ಮುಜಫರಾಬಾದ್ ಮತ್ತು ಹಿಮಾಚಲಪ್ರದೇಶ ಮತ್ತು ಉತ್ತರಾಖಂಡ ರಾಜ್ಯಗಳಲ್ಲೂ ಮಳೆ ಹಾಗೂ ಹಿಮ ಸುರಿಯುವ ನಿರೀಕ್ಷೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

***********

ಮ್ಯಾಡ್ರಿಡ್ ಸ್ಪೇನ್ ಮಾಸ್ಟರ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ ಎನ್. ಸಿಕ್ಕಿರೆಡ್ಡಿ ಮತ್ತು ಬಿ. ಸುಮೀತ್ ರೆಡ್ಡಿ ಮಿಶ್ರ ಡಬಲ್ಸ್ ಜೋಡಿ ಸೆಮಿಫೈನಲ್ ಪ್ರವೇಶಿಸಿದೆ. ಈ ಜೋಡಿ ಇಂಡೋನೇಷ್ಯಾದ ಲಿಸಾ ಅಯು ಕುಸುಮವತಿ ಮತ್ತು ರೆಹಾನ್ ಕುಶರ್ ಜಂತೊ ವಿರುದ್ಧ ೨೧-೧೪, ೧೧-೨೧, ೧೬-೨೧ರಿಂದ ಗೆಲುವು ಸಾಧಿಸಿದೆ. ಇಂದು ಭಾರತದ ಜೋಡಿ ಇಂಡೋನೇಷ್ಯಾದ ರಿನೋ ರಿವಾಲ್ದಿ ಮತ್ತು ಪಿತಾಮೆಂತರಿ ಜೋಡಿ ಎದುರು ಸೆಣಸಲಿದೆ. ಈ ಮಧ್ಯೆ, ಭಾರತದ ಪಿ.ವಿ. ಸಿಂಧು ಮಹಿಳೆಯರ ಸಿಂಗಲ್ಸ್ ವಿಭಾಗದಿಂದ ಹೊರಬಿದ್ದಿದ್ದಾರೆ. ಅಂತೆಯೇ ಪುರುಷರ ಡಬಲ್ಸ್ ಜೋಡಿ ಡಿ. ಕಪಿಲಾ ಮತ್ತು ಎಂ.ಆರ್. ಅರ್ಜುನ್ ಅವರೂ ಸಹ ಪರಾಭವಗೊಂಡಿದ್ದಾರೆ. ಮಹಿಳೆಯರ ಡಬಲ್ಸ್ ವಿಭಾಗದಲ್ಲಿ ಭಾರತದ ತನಿಷಾ ಕ್ರಾಸ್ಟೋ ಮತ್ತು ಅಶ್ವಿನಿ ಪೊನ್ನಪ್ಪ ಜೋಡಿ ಕೂಡ ತೈವಾನ್ ಜೋಡಿ ಎದುರು ಸೋಲುಂಡಿದೆ.

***********

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ವಿರುದ್ಧ ೭ ವಿಕೆಟ್‌ಗಳ ಗೆಲುವು ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ರಾಯಲ್ ಚಾಲೆಂಜರ್ಸ್ ನಿಗದಿತ ೨೦ ಓವರ್‌ಗಳಲ್ಲಿ ವಿರಾಟ್ ಕೊಹ್ಲಿ ಅವರ ೮೩ ರನ್‌ಗಳ ನೆರವಿನಿಂದ ೧೮೩ ರನ್ ಗಳಿಸಿತ್ತು. ಗೆಲುವಿನ ಗುರಿ ಬೆನ್ನಟ್ಟಿದ ಕೋಲ್ಕತ್ತಾ ತಂಡ ೧೬.೫ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ಗೆಲುವು ಸಾಧಿಸಿತು. ವೆಂಕಟೇಶ್ ಅಯ್ಯರ್ ೩೦ ಎಸೆತಗಳಲ್ಲಿ ೫೦ ರನ್ ಸಿಡಿಸಿದರು. ಈ ಗೆಲುವಿನಿಂದಾಗಿ ಕೋಲ್ಕತ್ತಾ ನೈಟ್ ರೈಡರ್ಸ್, ಈ ಆವೃತ್ತಿಯಲ್ಲಿ ಆಡಿದ ಎರಡೂ ಪಂದ್ಯಗಳಲ್ಲೂ ಗೆಲುವು ಸಾಧಿಸಿದಂತಾಗಿದೆ. ಬೆಂಗಳೂರು ರಾಯಲ್ ಚಾಲೆಂಜರ್ಸ್ ಆಡಿರುವ ಮೂರು ಪಂದ್ಯಗಳ ಪೈಕಿ ಒಂದು ಪಂದ್ಯದಲ್ಲಿ ಮಾತ್ರ ಜಯಗಳಿಸಿದೆ.

ಇಂದು ರಾತ್ರಿ ೭.೩೦ಕ್ಕೆ ಲಖನೌದಲ್ಲಿ ನಡೆಯಲಿರುವ ಪಂದ್ಯದಲ್ಲಿ ಲಖನೌ ಸೂಪರ್ ಜೈಂಟ್ಸ್ ಮತ್ತು ಪಂಜಾಬ್ ಕಿಂಗ್ಸ್ ತಂಡ ಪರಸ್ಪರ ಸೆಣಸಲಿವೆ.

***********